# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 843

2 ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3 ಉತ್ತರಿಸಬೇಕಾದ ದಿನಾಂಕ : 13.03.2025

4 ಉತ್ತರಿಸುವ ಸಚಿವರು : ಗೃಹ ಸಚಿವರು

| ಪ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಹಾಗೂ ಮಂಗಳೂರು ನಗರದಲ್ಲಿ ಎಎಸ್‌ಐ ಹುದ್ದೆಯಿಂದ ಪಿಎಸ್‌ಐ ಹುದ್ದೆಗೆ ಮುಂಬಡ್ತಿ ನೀಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; (ಸಂಪೂರ್ಣವಾದ ವಿವರ ಒದಗಿಸುವುದು) | ಬೆಂಗಳೂರು ಹಾಗೂ ಮಂಗಳೂರು ನಗರಗಳಲ್ಲಿ ಎಎಸ್‌ಐ ಹುದ್ದೆಯಿಂದ ಪಿಎಸ್‌ಐ ಹುದ್ದೆಗೆ ಮುಂಬಡ್ತಿ ನೀಡಲು ಪಿಎಸ್‌ಐ ಹುದ್ದೆಗಳು ಖಾಲಿ ಇರುವುದಿಲ್ಲ. |
| (ಆ) | ರಾಜ್ಯದಲ್ಲಿ ಬೇರೆ ಬೇರೆ ಸರ್ಕಾರಿ ಇಲಾಖೆಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಶೇಕಡ 50-50 ಅನುಪಾತದಲ್ಲಿದ್ದು ಪೊಲೀಸ್ ಇಲಾಖೆಯಲ್ಲಿ ಮಾತ್ರ 70-30ರ ಅನುಪಾತದಲ್ಲಿದ್ದು ಈ ತಾರತಮ್ಯವನ್ನು ಯಾವಾಗ ಸರಿ ಪಡಿಸಲಾಗುವುದು; ಸರಿಪಡಿಸಲು ಇರುವ ಸಮಸ್ಯೆಗಳೇನು; | ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪಿಎಸ್‌ಐ ಹುದ್ದೆಗೆ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡಾ 70:30ರ ಅನುಪಾತವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಅನುಪಾತ ನಿಗದಿಯು ಇಲಾಖೆಯ ಕಾರ್ಯನಿರ್ವಹಣೆ ಮತ್ತು ಆಡಳಿತಕ್ಕೆ ಪೂರಕವಾಗಿರುತ್ತದೆ. |
| (ಇ) | ರಾಜ್ಯದ ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಯಲ್ಲಿ ಎಎಸ್‌ಐ ಮತ್ತು ಪಿಎಸ್‌ಐ ವಾರ್ಷಿಕ ಗೆಜೆಟೆಡ್ 30 ದಿನಗಳ ವೇತನವನ್ನು ಪಡೆಯುತ್ತಿದ್ದು ಪೊಲೀಸ್ ಇಲಾಖೆಯಲ್ಲಿ ಎಎಸ್‌ಐ ಮತ್ತು ಪಿಎಸ್‌ಐ ಗೆಜೆಟೆಡ್ 15 ದಿನಗಳ ವೇತನವನ್ನು ನೀಡಲಾಗುತ್ತಿದೆ; ಹೆಚ್ಚಿನ ಕೆಲಸ ನಿರ್ವಹಿಸುವ ಪೊಲೀಸ್ ಇಲಾಖೆಗೆ 30 ದಿನಗಳ ವೇತನವನ್ನು ನೀಡಲು ಸರ್ಕಾರ ಕ್ರಮವಹಿಸುವುದೇ? | ಪ್ರಸ್ತುತ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಕೆಲವು ನಿರ್ದಿಷ್ಟ ವೃಂದದ ಸಿಬ್ಬಂದಿಗಳನ್ನೂ ಒಳಗೊಂಡಂತೆ ಪೊಲೀಸ್ ಇಲಾಖೆಯ ಪೊಲೀಸ್ ಕಾನ್ಸ್ ಟೇಬಲ್ ಮತ್ತು ಹೆಡ್ ಕಾನ್ಸ್ ಟೇಬಲ್ ವೃಂದದ ಸಿಬ್ಬಂದಿಗಳಿಗೆ ಅವರು ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ 30 ದಿನಗಳ ಹೆಚ್ಚುವರಿ ವೇತನವನ್ನು ಪಾವತಿಸಲು ಅವಕಾಶವಿರುತ್ತದೆ.<br><br>ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಲಭ್ಯವಿರುವ ಪತ್ರಾಂಕಿತ ರಜಾ ವೇತನದ ಸೌಲಭ್ಯವೂ ಸೇರಿದಂತೆ ಸರ್ಕಾರಿ ನೌಕರರ ವಿಶೇಷ ಭತ್ಯೆಯ ಪರಿಷ್ಕರಣೆಯು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿರುತ್ತದೆ.<br><br>ಪೊಲೀಸ್ ಇಲಾಖೆಯ ಎ.ಎಸ್.ಐ ಮತ್ತು ಪಿ.ಎಸ್.ಐ ವೃಂದದ ಸಿಬ್ಬಂದಿಗಳು ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ ಪ್ರಸ್ತುತ ಲಭ್ಯವಿರುವ 15 ದಿವಸಗಳ ವೇತನವನ್ನು 30 ದಿವಸಗಳ ವೇತನಕ್ಕೆ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಒಇ 59 ಪಿಇಐ 2025

(ಡಾ. ಜಿ. ಪರಮೇಶ್ವರ)
ಗೃಹ ಸಚಿವರು